# ಅಕ್ಷರ ದಾಸೋಹ ಮತ್ತು ಕ್ಷೀರ ಭಾಗ್ಯ

**ಪೀಠಿಕೆ:**

ಅಕ್ಷರ ದಾಸೋಹ ಮತ್ತು ಕ್ಷೀರ ಭಾಗ್ಯ ಕರ್ನಾಟಕ ರಾಜ್ಯದ ಮಹತ್ವದ ಸಾಮಾಜಿಕ ಯೋಜನೆಗಳಾಗಿವೆ. ಮಕ್ಕಳ ಶಿಕ್ಷಣದ ಅಭಿವೃದ್ಧಿ ಮತ್ತು ಆರೋಗ್ಯ ಕಾಪಾಡುವ ಉದ್ದೇಶದಿಂದ ಈ ಯೋಜನೆಗಳನ್ನು ಆರಂಭಿಸಲಾಯಿತು.

ಅಕ್ಷರ ದಾಸೋಹ ಯೋಜನೆ ಉಚಿತ ಮಧ್ಯಾಹ್ನ ಆಹಾರ ಯೋಜನೆಯ ಭಾಗವಾಗಿದ್ದು, 2002ರಲ್ಲಿ ಕರ್ನಾಟಕ ಸರ್ಕಾರದಿಂದ ಆರಂಭವಾಯಿತು. ಈ ಯೋಜನೆಯ ಉದ್ದೇಶ ಶಾಲಾ ಮಕ್ಕಳಿಗೆ ಪೌಷ್ಠಿಕ ಆಹಾರವನ್ನು ಕೊಡುವುದು. ಇದು ಮಕ್ಕಳಲ್ಲಿ ಹಸಿವನ್ನು ತಣಿಸುತ್ತದಷ್ಟೇ ಅಲ್ಲ, ಆರೋಗ್ಯಕರ ಬೆಳವಣಿಗೆಗೆ ಸಹಾಯ ಮಾಡುತ್ತದೆ. ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಊಟದ ವ್ಯವಸ್ಥೆ ಮಾಡಿದರೆ ಶಾಲೆಯನ್ನು ಬಿಡುವುದು ಕಡಿಮೆಯಾಗುತ್ತದೆ ಮತ್ತು ಮಕ್ಕಳು ಓದಲು ಶಾಲೆಗೆ ಬರುತ್ತಾರೆ. ಪೌಷ್ಠಿಕ ಆಹಾರವು ಮಕ್ಕಳ ಬೆಳವಣಿಗೆಗೆ ಸಹಾಯ ಮಾಡುತ್ತದೆ. ಇದರೊಂದಿಗೆ, ವಿದ್ಯಾರ್ಥಿಗಳ ಹಾಜರಾತಿ ಹೆಚ್ಚುತ್ತಿದೆ ಮತ್ತು ಬೀದಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿದೆ.

ಕ್ಷೀರ ಭಾಗ್ಯ ಯೋಜನೆ 2013ರಲ್ಲಿ ಆರಂಭವಾಯಿತು. ಈ ಯೋಜನೆಯಲ್ಲಿ ಸರ್ಕಾರಿ ಶಾಲಾ ಮಕ್ಕಳಿಗೆ ವಾರದ ನಾಲ್ಕು- ಐದು ದಿನಗಳು ಪೌಷ್ಠಿಕವಾದ ಹಾಲು ಉಚಿತವಾಗಿ ನೀಡಲಾಗುತ್ತದೆ. ಹಾಲಿನ ಸೇವನೆಯಿಂದ ಮಕ್ಕಳ ಆರೋಗ್ಯ ದೈಹಿಕ ಮತ್ತು ಬುದ್ಧಿ ಅಭಿವೃದ್ಧಿಯಾಗುತ್ತದೆ.

FOR KANNADA ಕನ್ನಡಕ್ಕಾಗಿ ಇಲ್ಲಿ ಬನ್ನಿ

**ವಿಷಯ ನಿರೂಪಣೆ:**

ಈ ಎರಡು ಯೋಜನೆಗಳು ಮಕ್ಕಳ ವಿದ್ಯಾಭ್ಯಾಸ ಮತ್ತು ಆರೋಗ್ಯದ ನಡುವಿನ ಸಂಬಂಧವನ್ನು ಬಲಪಡಿಸಿವೆ. ಇವು ಸಮಾಜದಲ್ಲಿ ಸಮಾನತೆಯನ್ನು ತರಲು ಸಹಾಯ ಮಾಡುತ್ತವೆ ಮತ್ತು ಮುಂದಿನ ಪೀಳಿಗೆಯ ಭವಿಷ್ಯವನ್ನು ಬೆಳೆಸುತ್ತದೆ.

ಅಕ್ಷರ ದಾಸೋಹ ಮತ್ತು ಕ್ಷೀರ ಭಾಗ್ಯ ಯೋಜನೆಗಳು ಕರ್ನಾಟಕ ಸರ್ಕಾರದ ಪ್ರಮುಖ ಶಿಕ್ಷಣ ಮತ್ತು ಪೌಷ್ಟಿಕತೆಯ ಯೋಜನೆಗಳಾಗಿವೆ. ಈ ಯೋಜನೆಗಳು ರಾಜ್ಯದ ಬಡ, ಗ್ರಾಮೀಣ ಮತ್ತು ಹಿಂದುಳಿದ ಮಕ್ಕಳಿಗೆ ಉತ್ತಮವಾದ ಶಿಕ್ಷಣ ನೀಡುವಲ್ಲಿ ಯಶಸ್ವಿಯಾಗಿದೆ. ಇದರಿಂದ ಮಕ್ಕಳಿಗೆ ಉಜ್ವಲ ಭವಿಷ್ಯ ಸಿಗುತ್ತದೆ.

FOR KANNADA
ಕನ್ನಡಕ್ಕಾಗಿ ಇಲ್ಲಿ ಬನ್ನಿ

ಶಾಲಾ ಮಕ್ಕಳಿಗೆ ಪ್ರತಿ ದಿನ ಒಂದು ಲೋಟ ಹಾಲನ್ನು ಉಚಿತವಾಗಿ ನೀಡಲಾಗುತ್ತದೆ. ಇದು ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯನ್ನು ಉತ್ತಮಗೊಳಿಸುತ್ತದೆ. ಹಾಲಿನಲ್ಲಿ ಇರುವ ಪೌಷ್ಟಿಕತೆಯು ಮಕ್ಕಳ ಶಕ್ತಿ ಮತ್ತು ಕೌಶಲ್ಯವನ್ನು ವೃದ್ಧಿಸುತ್ತದೆ.

**ಉಪಸಂಹಾರ:**

ಈ ಎರಡು ಯೋಜನೆಗಳು ಮಕ್ಕಳ ರಕ್ಷಣೆ ಮತ್ತು ಸಮಾಜದ ಅಭಿವೃದ್ಧಿಗೆ ದೊಡ್ಡ ಹೆಜ್ಜೆ ಎಂದು ಗುರುತಿಸಲ್ಪಡುತ್ತವೆ.

ಕಲಿಯುವ ಪ್ರಕ್ರಿಯೆಯಲ್ಲಿ ಆರೋಗ್ಯ ಮತ್ತು ಪೌಷ್ಠಿಕತೆ ಕೂಡ ಸಮಾನವಾಗಿ ಪ್ರಮುಖವಾಗಿದ್ದು, ಅಕ್ಷರ ದಾಸೋಹ ಮತ್ತು ಕ್ಷೀರ ಭಾಗ್ಯ ಯೋಜನೆಗಳು ಮಕ್ಕಳ ಭವಿಷ್ಯವನ್ನು ಪ್ರಕಾಶಮಾನಗೊಳಿಸುತ್ತಿವೆ.

FOR KANNADA
ಕನ್ನಡಕ್ಕಾಗಿ ಇಲ್ಲಿ ಬನ್ನಿ